ಈ) ಹೆಚ್ಚಿನ ಸಂಖ್ಯೆಯಲ್ಲಿ ಕ್ರೀಡಾಂಗಣಗಳನ್ನು ಹಾಗೂ ಕ್ರೀಡಾ ತರಬೇತಿ ಕೇಂದ್ರಗಳನ್ನು ನಿರ್ಮಿಸಿ ದಕ್ಷಿಣ ಕನ್ನಡ ಜಿಲ್ಲೆಯ ಕ್ರೀಡಾಪಟುಗಳಿಗೆ ಯುವಜನರಿಗೆ ಅನುಕೂಲ ಮಾಡಿಕೊಡುವಲ್ಲಿ ತ್ವರಿತ ಕ್ರಮಗಳನ್ನು ಸರ್ಕಾರದವರು ಕೈಗೊಳ್ಳುವರೆ?

ಶ್ರೀ ಎಸ್. ರಮೇಶ್ (ವಾರ್ತಾ ಪ್ರವಾಸೋದ್ಯಮ ಮತ್ತು ಯುವಜನ ಸೇವಾ ಸಚಿವರು) :

ಅ) ಮಂಗಳೂರು ಜಿಲ್ಲಾ ಕ್ರೀಡಾಂಗಣ.

ಆ) ಹೌದು.

ಇ) ತಾಲ್ಲೂಕು ಕೇಂದ್ರಗಳಲ್ಲಿ ಕ್ರೀಡಾಂಗಣಗಳನ್ನು ಪ್ರಾರಂಭಿಸಲು 8ನೇ ಪಂಚವಾರ್ಷಿಕ ಯೋಜನೆಯಲ್ಲಿ ಉದ್ದೇಶಿಸಲಾಗಿದೆ. ಆರ್ಥಿಕ ಸ್ಥಿತಿಯನ್ನು ಗಮನದಲ್ಲಿಟ್ಟು ವಿಷಯವನ್ನು ಪರಿಶೀಲಿಸಲಾಗುವುದು.

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅಗ್ನಿಶಾಮಕ ದಳದ ಕೇಂದ್ರ ಸ್ಥಾಪನೆ ಕುರಿತು

863 - ಶ್ರೀ ಪಿ. ಬಸವರಾಜ್ (ಬ್ರಹ್ಮಾವರ) : ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ ಅಗ್ನಿಶಾಮಕ ದಳದ ಕೇಂದ್ರಗಳ ಸಂಖ್ಯೆ ಎಷ್ಟು?(ಸ್ಥಳಗಳ ಹೆಸರಿನೊಂದಿಗೆ ತಿಳಿಸುವುದು)

ಆ) ತಾಲ್ಲೂಕು ಕೇಂದ್ರಗಳಲ್ಲಿ ಈ ಸೌಲಭ್ಯ ಇಲ್ಲದೇ ಇರುವುದರಿಂದ ಸಾರ್ವಜನಿಕರಿಗೆ ತುರ್ತು ಸಂದರ್ಭಗಳಲ್ಲಿ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೇ?

ಇ) ಪರಿಸ್ಥಿತಿಯನ್ನು ಅರಿತು ತಾಲ್ಲೂಕು ಕೇಂದ್ರಗಳಲ್ಲಿ ಅಗ್ನಿಶಾಮಕ ದಳದ ಕೇಂದ್ರ ಸ್ಥಾಪಿಸುವ ಅಗತ್ಯತೆಯನ್ನು ಸರ್ಕಾರದವರು ಮನಗಂಡಿದ್ದಾರೆಯೇ?

ಈ) ಈ ಕೇಂದ್ರಗಳ ತುರ್ತು ಅವಶ್ಯಕತೆಗನುಗುಣವಾಗಿ ಸರ್ಕಾರದವರು ಕೈಗೊಂಡ ಕ್ರಮಗಳೇನು?

ಶ್ರೀ ಧರ್ಮಸಿಂಗ್ (ಗೃಹಸಚಿವರು):

ಅ) ಎರಡು (2) ಮಂಗಳೂರು ಮತ್ತು ಉಡುಪಿ.

ಆ) ಹೌದು.

ಇ) ಹೌದು.

ಈ) ದಕ್ಷಿಣ ಕನ್ನಡ ಜಿಲ್ಲೆಯ ಸೂಳ್ಯದಲ್ಲಿ ಅಗ್ನಿಶಾಮಕ ಠಾಣೆಯನ್ನು ಸ್ಥಾಪಿಸುವ ಪ್ರಸ್ತಾವನೆ 1990-91ನೇ ಆರ್ಥಿಕ ಸಾಲಿನಲ್ಲಿ ಸರ್ಕಾರ ಪರಿಶೀಲಿಸಲಾಗುತ್ತಿದೆ. ಎಲ್ಲಾ ತಾಲ್ಲೂಕು ಕೇಂದ್ರಗಳಲ್ಲೂ ಸ್ಥಾಪಿಸುವ ವಿಷಯ ಸಂಪನ್ಮೂಲಗಳ ಲಭ್ಯವನ್ನು ಅವಲಂಬಿಸಿದೆ.

ಹಂಪೆಯಲ್ಲಿ ಕನ್ನಡ ವಿಶ್ವವಿದ್ಯಾನಿಲಯ ಸ್ಥಾಪಿಸುವ ಬಗ್ಗೆ

875 - ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ)- ಮಾನ್ಯ ಶಿಕ್ಷಣ ಹಾಗೂ ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟು ಉತ್ತರಿಸುವರೆ?

ಅ) ಹಂಪೆಯಲ್ಲಿ ಕನ್ನಡ ವಿಶ್ವವಿದ್ಯಾನಿಲಯ ಸ್ಥಾಪಿಸಲು ಸರ್ಕಾರ ನಿರ್ಧರಿಸುದೆಯೇ?

ಆ) ಹಾಗಿದ್ದಲ್ಲಿ ಈ ಬಗ್ಗೆ ಏನೇನು ಕಾರ್ಯಕ್ರಮಗಳನ್ನು ಕೈಗೊಳ್ಳಲಾಗಿದೆ?